# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ :** ರಾಜ್ಯದ ಅಲ್ಪಸಂಖ್ಯಾತರ ಸಮುದಾಯಕ್ಕೆ ಸೇರಿದ ಪದವಿ ಪೂರ್ವ, ಪದವಿ ಮತ್ತು ಸ್ನಾತಕೋತ್ತರ, ಮತ್ತು ವೃತ್ತಿಪರ ಹಾಗೂ ತಾಂತ್ರಿಕ, ಎಂ.ಫಿಲ್ ಮತ್ತು ಪಿ.ಹೆಚ್.ಡಿ ಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ **"ಶುಲ್ಕ ಮರುಪಾವತಿ"** ಯೋಜನೆಯನ್ನು ಅನುಷ್ಠಾನಗೊಳಿಸುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಹಿಂವಕ 589 ಬಿಎಂಎಸ್ 2014, ದಿನಾಂಕ: 05.10.2014.
2. ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂ: ಆಇ 165 ವೆಚ್ಚ-3, 2014 ದಿನಾಂಕ: 04.04.2014.
3. ಆರ್ಥಿಕ ಇಲಾಖೆ ಹಿಂಬರಹ ಸಂ: ಆಇ 694 ವೆಚ್ಚ-3 2014 ದಿ: 26.09.2014.
4. ನಿರ್ದೇಶಕರು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಇವರ ಪತ್ರ ಸಂಖ್ಯೆ ಆಸಂನಿ/ಶುಮ/ಸಿಆರ್-07/2014-15, ದಿನಾಂಕ: 13.08.2014.

**ಪ್ರಸ್ತಾವನೆ:**

ರಾಜ್ಯದ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಶುಲ್ಕ ಮರುರುಪಾವತಿ ಯೋಜನೆಯನ್ನು ಹಿಂದುಳಿದ ವರ್ಗಗಳ ಇಲಾಖೆಯಿಂದಲೇ ನೀಡಲಾಗುತ್ತಿತ್ತು. ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯು ಹಿಂದುಳಿದ ವರ್ಗಗಳ ಇಲಾಖೆಯಿಂದ ಬೇರ್ಪಟ್ಟು ಪ್ರತ್ಯೇಕವಾಗಿ ಕಾರ್ಯನಿರ್ವಹಿಸುತ್ತಿದ್ದು ಶುಲ್ಕ ಮರುಪಾವತಿ ಯೋಜನೆಯು ಮಾತ್ರ ಹಿಂದುಳಿದ ವರ್ಗಗಳ ಇಲಾಖೆಯಿಂದಲೇ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೂ ಸಹ ಶುಲ್ಕ ಮರುಪಾವತಿ ಮಾಡಲಾಗುತ್ತಿತ್ತು.

ಮೇಲೆ (1) ರಲ್ಲಿ ಓದಲಾದ 05.10.2014ರ ಸರ್ಕಾರದ ಆದೇಶದಲ್ಲಿ ಹಿಂದುಳಿದ ವರ್ಗಗಳ ಇಲಾಖೆಯು ಸಮಾಜ ಕಲ್ಯಾಣ/ಪರಿಶಿಷ್ಟ ವರ್ಗಗಳ ಕಲ್ಯಾಣ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ವಿದ್ಯಾರ್ಥಿಗಳಿಗೆ ಈ ಸೌಲಭ್ಯವನ್ನು ನೀಡಲಾಗುವುದಿಲ್ಲವೆಂದು ಆದೇಶಿಸಲಾಗಿದೆ. ಆದುದರಿಂದ, ಈ ವಿಷಯವನ್ನು 2014-15ನೇ ಸಾಲಿನ ಆಯವ್ಯಯ ಮಂಡನೆಯ ಸಂದರ್ಭದಲ್ಲಿ ಆರ್ಥಿಕ ಇಲಾಖೆಯೊಂದಿಗೆ ಚರ್ಚಿಸಲಾಗಿದ್ದು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವತಿಯಿಂದ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಪ್ರತ್ಯೇಕವಾಗಿ ಶುಲ್ಕ ಮರುಪಾವತಿ ಯೋಜನೆಯನ್ನು ಜಾರಿಗೊಳಿಸುವಂತೆ ಮೇಲೆ (2) ರಲ್ಲಿ ಓದಲಾದ ಟಿಪ್ಪಣಿಯಲ್ಲಿ ತಿಳಿಸಿರುವ ಹಿನ್ನಲೆಯಲ್ಲಿ ಹಾಗೂ ಈ ಹೊಸ ಯೋಜನೆಗಾಗಿ ಮೇಲೆ (3)ರಲ್ಲಿ ಓದಲಾದ ಹಿಂಬರಹದಲ್ಲಿ ಹೊಸ ಲೆಕ್ಕಶೀರ್ಷಿಕೆ ಸಂಖ್ಯೆ 2225-03-227-3-88ನ್ನು ನೀಡಲಾಗಿದ್ದು, ಇದಕ್ಕಾಗಿ ಹೊಸ ಯೋಜನೆಯನ್ನು ರೂಪಿಸಿ ಮಾರ್ಗಸೂಚಿಗಳನ್ನು ರಚಿಸಿ ಸರ್ಕಾರದ ಆದೇಶವನ್ನು ಹೊರಡಿಸುವಂತೆ ಮೇಲೆ (4)ರಲ್ಲಿ ಓದಲಾದ ಏಕಕಡತ ಪದ್ಧತಿಯಲ್ಲಿ ನಿರ್ದೇಶಕರು ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಎಂ.ಡಬ್ಲ್ಯೂ.ಡಿ 400 ಎಂ.ಡಿ.ಎಸ್ 2014 ದಿನಾಂಕ: 17.10.2014**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಅಲ್ಪಸಂಖ್ಯಾತರ ಸಮುದಾಯದ ಮೆಟ್ರಿಕ್ ನಂತರದ ಪದವಿ ಪೂರ್ವ, ಪದವಿ, ಸ್ನಾತಕೋತ್ತರ ಮತ್ತು ವೃತ್ತಿಪರ ಹಾಗೂ ತಾಂತ್ರಿಕ, ಎಂ.ಫಿಲ್ ಮತ್ತು

..2.